ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :—

ಅ) ಹೌದು. ಕೇಂದ್ರ ಸರ್ಕಾರದ ಗ್ರಾಮೀಣ ಅಭಿವೃದ್ಧಿ ಯೋಜನೆಯಡಿಯಲ್ಲಿ ಈ ಯೋಜನೆಯ ಕೈಗೊಳ್ಳಲು ಉದ್ದೇಶಿಸಿದ್ದು ಪೈಲಟ್ (Pilot) ಪ್ರಾಜೆಕ್ಟ್ ತಯಾರಿಕೆಯ ಹಂತದಲ್ಲಿದೆ.

ಆ) ಇನ್ನೂ ನಿರ್ಧರಿತವಾಗಿಲ್ಲ.

ಇ) ಈ ಯೋಜನೆಯ ರೂಪ ರೇಷೆಗಳು ಮುಗಿದ ನಂತರ ಆರ್ಥಿಕ ಲಭ್ಯತೆ ಆಧರಿಸಿ ನಿರ್ಧರಿಸಲಾಗುವುದು.

ಬಸವನ ಬಾಗೇವಾಡಿ ಪಟ್ಟಣಕ್ಕೆ ಕುಡಿಯುವ ನೀರು ಯೋಜನೆ ಅನುಷ್ಠಾನ.

2321(3414) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) :— ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ಬಸವನ ಬಾಗೇವಾಡಿ ಪಟ್ಟಣಕ್ಕೆ ಕೃಷ್ಣಾ ನದಿಯಿಂದ ಕುಡಿಯುವ ನೀರಿನ ಯೋಜನೆಗೆ ಸರ್ಕಾರ ನಿಗಧಿಪಡಿಸಿರುವ ಹಣವೆಷ್ಟು?

2. ಈಗಾಗಲೇ ಖರ್ಚಾಗಿರುವ ಹಣವೆಷ್ಟು?

3. ಯೋಜನೆಯನ್ನು ಪೂರ್ಣಗೊಳಿಸಲು ಸರ್ಕಾರವು ನಿಗಧಿಪಡಿಸಿದ ಕಾಲಾವಕಾಶವೆಷ್ಟು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು) :—

1. ರೂ. 15.00 ಕೋಟಿಗಳ ನೀರು ಸರಬರಾಜು ಯೋಜನೆಗೆ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

2. ರೂ. 681.44 ಲಕ್ಷಗಳು

3. ಎರಡು ವರ್ಷಗಳು.

ಬಿಜಾಪುರ ನಗರದಲ್ಲಿ ವಿಮಾನ ನಿಲ್ದಾಣ ಸ್ಥಾಪನೆ.

2323(3416) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ(ಬಸವನ ಬಾಗೇವಾಡಿ) :— ಮಾನ್ಯ ಒಳಾಡಳಿತ, ನಾಗರೀಕ ವಿಮಾನಯಾನ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.